**All India Radio: Bangalore**
**National Bulletin In Kannada**
**06.08.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.08.2025  19.35 p.m.**

**<><><><>**

ಮುಖ್ಯಾಂಶಗಳು

- ಕರ್ತವ್ಯ ಭವನ, ಅಭಿವೃದ್ಧಿ ಹೊಂದಿದ ಸ್ವಾವಲಂಬಿ ಭಾರತದ ಪ್ರತೀಕ : ಪ್ರಧಾನಿ ನರೇಂದ್ರ ಮೋದಿ
- ಭಾರತ-ರಷ್ಯಾ ರಕ್ಷಣಾ ಭದ್ರತೆ ಸಹಕಾರದ ಕುರಿತು ಅಜಿತ್ ದೋವೆಲ್ ನಾಳೆ ರಷ್ಯಾ ಅಧಿಕಾರಿಗಳೊಂದಿಗೆ ಚರ್ಚೆ
- ಅಶ್ಲೀಲ ವಿಷಯ ಪ್ರದರ್ಶನ ; ೪೩ ಒಟಿಟಿ ವೇದಿಕೆಗಳನ್ನು ನಿರ್ಬಂಧಿಸಿದ ಸರ್ಕಾರ
- ರೆಪೋ ದರ ಶೇಕಡ ೫.೫ ;  ಯಥಾಸ್ಥಿತಿ ಕಾಯ್ದುಕೊಂಡ ಭಾರತೀಯ ರಿಸರ್ವ್ ಬ್ಯಾಂಕ್

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ನವದೆಹಲಿಯ ಕರ್ತವ್ಯ ಪಥದಲ್ಲಿ ಕರ್ತವ್ಯ ಭವನ-೩ ಅನ್ನು ಉದ್ಘಾಟಿಸಿದರು. ಕರ್ತವ್ಯ ಭವನವು ಪ್ರತಿಯೊಬ್ಬ ವ್ಯಕ್ತಿಗೆ ಸೇವೆ ಸಲ್ಲಿಸುವ ಸರ್ಕಾರದ ಬದ್ಧತೆ ಮತ್ತು ನಿರಂತರ ಪ್ರಯತ್ನಗಳ ಸಂಕೇತವಾಗಿದೆ ಎಂದು ಸಾಮಾಜಿಕ ಮಾಧ್ಯಮ ಜಾಲತಾಣದಲ್ಲಿ ಅವರು ಬರೆದಿದ್ದಾರೆ. ಇದು ಸರ್ಕಾರದ ನೀತಿಗಳು ಮತ್ತು ಯೋಜನೆಗಳನ್ನು ಜನರಿಗೆ ತ್ವರಿತವಾಗಿ ತಲುಪಿಸಲು ಸಹಾಯ ಮಾಡುವುದಲ್ಲದೆ, ರಾಷ್ಟ್ರದ ಅಭಿವೃದ್ಧಿಗೆ ಹೊಸ ವೇಗವನ್ನು ನೀಡುತ್ತದೆ ಎಂದು ಅವರು ಹೇಳಿದರು. ಕರ್ತವ್ಯ ಭವನವು ಅಭಿವೃದ್ಧಿ ಹೊಂದಿದ ಮತ್ತು ಸ್ವಾವಲಂಬಿ ಭಾರತವನ್ನು ನಿರ್ಮಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಭವನವನ್ನು ರೂಪಿಸುವಲ್ಲಿ ನಿರ್ಮಾಣ ಕಾರ್ಮಿಕರ ಕಠಿಣ ಪರಿಶ್ರಮ ಮತ್ತು ದೃಢಸಂಕಲ್ಪಕ್ಕಾಗಿ ಅವರು ಸಂವಹನ ನಡೆಸಿದರು ಎಂದು ಪ್ರಧಾನಿ ಶ್ಲಾಘಿಸಿದ್ದಾರೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಪ್ರಸ್ತುತ ಪ್ರಧಾನಿ, ಕರ್ತವ್ಯ ಪಥದಲ್ಲಿ ನಡೆಯುತ್ತಿರುವ ಸಾರ್ವಜನಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ.

<><><><>

ನಾಳೆ ನವದೆಹಲಿಯ ಐಸಿಎಆರ್ ಪುಸಾದಲ್ಲಿ ಎಂ.ಎಸ್. ಸ್ವಾಮಿನಾಥನ್ ಶತಮಾನೋತ್ಸವ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ, ಮೊದಲ ಎಂ.ಎಸ್. ಸ್ವಾಮಿನಾಥನ್ ಆಹಾರ ಮತ್ತು ಶಾಂತಿ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ. ಎಂ.ಎಸ್. ಸ್ವಾಮಿನಾಥನ್ ಅವರ ಪರಂಪರೆಯನ್ನು ಗೌರವಿಸಲು ಎಂ.ಎಸ್. ಸ್ವಾಮಿನಾಥನ್ ಸಂಶೋಧನಾ ಪ್ರತಿಷ್ಠಾನ ಮತ್ತು ವಿಶ್ವ ವಿಜ್ಞಾನ ಅಕಾಡೆಮಿ ಈ ಪ್ರಶಸ್ತಿಯನ್ನು ಪ್ರಾರಂಭಿಸುತ್ತಿವೆ. ಈ ಅಂತಾರಾಷ್ಟ್ರೀಯ ಪ್ರಶಸ್ತಿಯು ಆಹಾರ ಭದ್ರತೆ ಸುಧಾರಿಸಲು ಮತ್ತು ದುರ್ಬಲ ಮತ್ತು ಅಂಚಿನಲ್ಲಿರುವ ಸಮುದಾಯಗಳಿಗೆ ಹವಾಮಾನ, ನ್ಯಾಯ, ಸಮಾನತೆ ಮತ್ತು ಶಾಂತಿಯನ್ನು ಮುನ್ನಡೆಸಲು ಕೊಡುಗೆ ನೀಡಿದ ಅಭಿವೃದ್ಧಿಶೀಲ ರಾಷ್ಟ್ರಗಳ ವ್ಯಕ್ತಿಗಳನ್ನು ಗುರುತಿಸುತ್ತದೆ.

<><><>

ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ನಾಳೆ ಮಾಸ್ಕೋದಲ್ಲಿ ರಷ್ಯಾದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಭಾರತ-ರಷ್ಯಾ ರಕ್ಷಣಾ ಮತ್ತು ಭದ್ರತಾ ಸಹಕಾರದ ಬಗ್ಗೆ ಚರ್ಚಿಸಲಿದ್ದಾರೆ. ಭಾರತದ ಸರಕುಗಳ ಮೇಲಿನ ಶೇಕಡಾ ೨೫ ರಷ್ಟು ಸುಂಕ ಹೆಚ್ಚಳವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿರುವ ಸಮಯದಲ್ಲಿ ಈ ಭೇಟಿ ಮಹತ್ವದ್ದಾಗಿದೆ. ಮಾಸ್ಕೋ ಭೇಟಿಯ ಸಮಯದಲ್ಲಿ, ಅಜಿತ್ ದೋವಲ್ ತೈಲ ವಿಷಯ ಮತ್ತು ಮುಂಬರುವ ಪ್ರಧಾನಿ ನರೇಂದ್ರ ಮೋದಿ ಹಾಗೂ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಜೊತೆ ಶೃಂಗಸಭೆಯ ಬಗ್ಗೆಯೂ ಮಾತುಕತೆ ನಡೆಸಲಿದ್ದಾರೆ.

<><><>

ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಮತದಾರ ಪಟ್ಟಿ ಪರಿಷ್ಕರಣೆ ಚಾಲನೆ ಸೇರಿದಂತೆ ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳು ಇಂದು ಗದ್ದಲ ಎಬ್ಬಿಸಿದ ನಂತರ ಸಂಸತ್ತಿನ ಉಭಯ ಸದನಗಳ ಕಲಾಪಗಳು ಅಸ್ತವ್ಯಸ್ತಗೊಂಡವು, ಇದು ಲೋಕಸಭೆ ಮತ್ತು ರಾಜ್ಯಸಭೆಯನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

<><><>

ಅಶ್ಲೀಲ ವಿಷಯವನ್ನು ಪ್ರದರ್ಶಿಸಿದ್ದಕ್ಕಾಗಿ ೪೩ ಒಟಿಟಿ ಪ್ಲಾಟ್‌ಫಾರ್ಮ್‌ಗಳನ್ನು ನಿರ್ಬಂಧಿಸಲಾಗಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಲೋಕಸಭೆಯಲ್ಲಿ

ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ವೈಷ್ಣವ್, ಒಟಿಟಿ ಪ್ಲಾಟ್‌ಫಾರ್ಮ್‌ಗಳಲ್ಲಿ ಹಾನಿಕಾರಕ ವಿಷಯದ ಋಣಾತ್ಮಕ ಪರಿಣಾಮಗಳನ್ನು ಪರಿಹರಿಸಲು ಸರ್ಕಾರವು ಮಾಹಿತಿ ತಂತ್ರಜ್ಞಾನ ಮಧ್ಯವರ್ತಿ ಮಾರ್ಗಸೂಚಿಗಳು ಮತ್ತು ಡಿಜಿಟಲ್ ಮಾಧ್ಯಮ, ನೀತಿ ಸಂಹಿತೆ ನಿಯಮಗಳು-೨೦೨೧ ಅನ್ನು ಜಾರಿಗೆ ತಂದಿದೆ ಎಂದು ಹೇಳಿದರು. ನಿಯಮಗಳ ಅಡಿಯಲ್ಲಿ, ಒಟಿಟಿ ಪ್ಲಾಟ್‌ಫಾರ್ಮ್‌ಗಳು ಕಾನೂನಿನಿಂದ ನಿಷೇಧಿಸಲಾದ ಯಾವುದೇ ವಿಷಯವನ್ನು ಪ್ರಸಾರ ಮಾಡದಿರಲು ಬಾಧ್ಯತೆಯನ್ನು ಹೊಂದಿವೆ ಎಂದು ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

<><><>

ರಾಷ್ಟ್ರೀಯ ಅಂಕಿ-ಅಂಶ ಕಚೇರಿ - ೨೦೨೬ ರಲ್ಲಿ ಗೃಹ ಆದಾಯ ಕುರಿತು ಸಮೀಕ್ಷೆ ನಡೆಸಲು ಯೋಜಿಸಿದೆ ಎಂದು ಕೇಂದ್ರ ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವ ರಾವ್ ಇಂದ್ರಜಿತ್ ಸಿಂಗ್ ಹೇಳಿದ್ದಾರೆ. ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರದಲ್ಲಿ, ಅಂತಾರಾಷ್ಟ್ರೀಯ ಹಣಕಾಸು ನಿಧಿಯ ಭಾರತದ ಮಾಜಿ ಕಾರ್ಯನಿರ್ವಾಹಕ ನಿರ್ದೇಶಕ ಡಾ. ಸುರ್ಜಿತ್ ಎಸ್. ಭಲ್ಲಾ ಅವರ ಅಧ್ಯಕ್ಷತೆಯಲ್ಲಿ ತಾಂತ್ರಿಕ ತಜ್ಞರ ಗುಂಪನ್ನು - ಟಿಇಜಿ ರಚಿಸಲಾಗಿದೆ ಎಂದು ಹೇಳಿದರು.

<><><>

ಲೋಕಸಭೆಯಲ್ಲಿಂದು ಮರ್ಚೆಂಟ್ ಶಿಪ್ಪಿಂಗ್ ಬಿಲ್ ೨೦೨೪ ಅನ್ನು ಅಂಗೀಕರಿಸಲಾಯಿತು. ಇದು ಮರ್ಚೆಂಟ್ ಶಿಪ್ಪಿಂಗ್ ಕಾಯ್ದೆ ೧೯೫೮ ಅನ್ನು ಬದಲಾಯಿಸುತ್ತದೆ. ಭಾರತವು ಒಂದು ಪಕ್ಷವಾಗಿರುವ ಸಮುದ್ರ ಒಪ್ಪಂದಗಳು ಮತ್ತು ಅಂತಾರಾಷ್ಟ್ರೀಯ ದಾಖಲೆಗಳ ಅಡಿಯಲ್ಲಿ ಭಾರತದ ಬಾಧ್ಯತೆಯ ಅನುಸರಣೆಯನ್ನು ಖಚಿತಪಡಿಸಿಕೊಳ್ಳಲು ಈ ಮಸೂದೆಯು ವ್ಯಾಪಾರಿ ಸಾಗಣೆಗೆ ಸಂಬಂಧಿಸಿದ ಕಾನೂನನ್ನು ತಿದ್ದುಪಡಿ ಮಾಡುತ್ತದೆ. ಇದು ರಾಷ್ಟ್ರೀಯ ಹಿತಾಸಕ್ತಿಯನ್ನು ಪೂರೈಸಲು ಸೂಕ್ತವಾದ ರೀತಿಯಲ್ಲಿ ಭಾರತೀಯ ಸಾಗಣೆಯ ಅಭಿವೃದ್ಧಿ ಮತ್ತು ಭಾರತೀಯ ವಾಣಿಜ್ಯ ಸಾಗರದ ಪರಿಣಾಮಕಾರಿ ನಿರ್ವಹಣೆಯನ್ನು ಖಚಿತಪಡಿಸುತ್ತದೆ. ಚರ್ಚೆಗೆ ಉತ್ತರಿಸಿದ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್, ಮಸೂದೆಯು ಅಂತಾರಾಷ್ಟ್ರೀಯ ಸಮುದ್ರ ಸಮಾವೇಶದೊಂದಿಗೆ ಆಧುನಿಕ ಶಾಸನವಾಗಿದೆ ಎಂದು ಹೇಳಿದರು.

<><><>

ಸಮುದ್ರದ ಮೂಲಕ ಸರಕು ಸಾಗಣೆ ಮಸೂದೆ ೨೦೨೫ ಅನ್ನು ಸಂಸತ್ತು ಅಂಗೀಕರಿಸಿದ್ದು, ರಾಜ್ಯಸಭೆಯು ಇಂದು ಅದಕ್ಕೆ ಅನುಮೋದನೆ ನೀಡಿದೆ. ಈ ಮಸೂದೆಯನ್ನು ಈಗಾಗಲೇ ಲೋಕಸಭೆಯು ಅಂಗೀಕರಿಸಿದೆ. ಈ ಮಸೂದೆಯು ಸಮುದ್ರದ ಮೂಲಕ ಭಾರತೀಯ ಸರಕು ಸಾಗಣೆ ಕಾಯ್ದೆ-೧೯೨೫ ಅನ್ನು ಬದಲಿಸಲು ಉದ್ದೇಶಿಸಿದೆ. ಬಂದರಿನಿಂದ ಸಾಗಿಸುವ ಸರಕುಗಳ ಜವಾಬ್ದಾರಿ, ಹೊಣೆಗಾರಿಕೆ, ಹಕ್ಕು ಹಾಗೂ ವಿನಾಯಿತಿಗಳನ್ನು ಈ ಕಾಯ್ದೆ ನಿಯಂತ್ರಿಸುತ್ತದೆ. ಚರ್ಚೆಗೆ ಉತ್ತರಿಸಿದ ಹಡಗು ಮತ್ತು ಜಲಮಾರ್ಗಗಳ ರಾಜ್ಯ ಸಚಿವ ಶಾಂತನು ಠಾಕೂರ್, ಸಮುದ್ರದ ಮೂಲಕ ಸರಕು ಸಾಗಣೆ ಮಸೂದೆ-೨೦೨೫ ನೂರು ವರ್ಷಗಳಷ್ಟು ಹಳೆಯದಾದ ಶಾಸನವನ್ನು ರದ್ದುಗೊಳಿಸಲು ಮತ್ತು ಬದಲಿಸಲು ಉದ್ದೇಶಿಸಿದೆ ಎಂದು ಹೇಳಿದರು.

<><><>

ಈ ವರ್ಷದ ಮೇ ತಿಂಗಳಿನಿಂದ ಗ್ರಾಮೀಣ ಮತ್ತು ಅರೆ ನಗರ ಪ್ರದೇಶಗಳ ಸುಮಾರು ಎರಡು ಸಾವಿರದ ೫೦೦ ಮಹಿಳೆಯರಿಗೆ ರಾಷ್ಟ್ರೀಯ ಮಹಿಳಾ ಆಯೋಗದ ಯಶೋದಾ ಕೃತಕ ಬುದ್ಧಿಮತ್ತೆ ಸಾಕ್ಷರತಾ ಕಾರ್ಯಕ್ರಮದಡಿಯಲ್ಲಿ ತರಬೇತಿ ನೀಡಲಾಗಿದೆ ಎಂದು ಸರ್ಕಾರ ರಾಜ್ಯಸಭೆಯಲ್ಲಿಂದು ತಿಳಿಸಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ರಾಜ್ಯಸಭೆಯಲ್ಲಿ ಇಂದು ಲಿಖಿತ ಉತ್ತರದಲ್ಲಿ ಸೈಬರ್ ಭದ್ರತೆ, ಡಿಜಿಟಲ್ ಗೌಪ್ಯತೆ ಮತ್ತು ಸುರಕ್ಷಿತ ಆನ್‌ಲೈನ್ ಅಭ್ಯಾಸಗಳ ಕ್ಷೇತ್ರಗಳಲ್ಲಿ ಮಹಿಳೆಯರನ್ನು ಸಬಲೀಕರಣಗೊಳಿಸಲು ಮತ್ತು ಡಿಜಿಟಲ್ ಸೇರ್ಪಡೆ ಹೆಚ್ಚಿಸಲು ಈ ಕಾರ್ಯಕ್ರಮ ಪ್ರಾರಂಭಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><><>

ಭಾರತೀಯ ರಿಸರ್ವ್ ಬ್ಯಾಂಕ್ - ಆರ್‌ಬಿಐ ಇಂದು ತಟಸ್ಥ ನಿಲುವನ್ನು ಕಾಯ್ದುಕೊಂಡು ರೆಪೊ ದರವನ್ನು ಶೇಕಡಾ ೫.೫ ರಲ್ಲಿ ಯಥಾಸ್ಥಿತಿಯಲ್ಲಿ ಇರಿಸಿದೆ. ಆರು ಸದಸ್ಯರ ಹಣಕಾಸು ನೀತಿ ಸಮಿತಿಯ ಮೂರು ದಿನಗಳ ಸಭೆಯ ನಂತರ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಇಂದು ಬೆಳಿಗ್ಗೆ ಈ ನಿರ್ಧಾರವನ್ನು ಪ್ರಕಟಿಸಿದರು.

<><><>

ಉತ್ತರಕಾಶಿಯ ಧರಾಲಿಯಲ್ಲಿ ಸಂಭವಿಸಿದ ಭೀಕರ ಮೇಘಸ್ಫೋಟದ ನಂತರ ಒಬ್ಬ ಜೂನಿಯರ್ ಕಮಿಷನ್ಡ್ ಆಫೀಸರ್ ಮತ್ತು ೮ ಜವಾನರು ಇನ್ನೂ ಕಾಣೆಯಾಗಿದ್ದಾರೆ ಎಂದು ಭಾರತೀಯ ಸೇನೆ ತಿಳಿಸಿದೆ. ತ್ವರಿತ ಮತ್ತು ಸಂಘಟಿತ ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ

ಕಾರ್ಯಾಚರಣೆ ನಡೆಯುತ್ತಿದೆ. ಪದಾತಿ ದಳ ಮತ್ತು ಎಂಜಿನಿಯರಿಂಗ್ ತಂಡಗಳು ಸೇರಿದಂತೆ ೨೨೫ಕ್ಕೂ ಹೆಚ್ಚು ಸೇನಾ ಸಿಬ್ಬಂದಿ ಶೋಧ, ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಾಗಿ ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದೆ. ಭಗ್ನಾವಶೇಷಗಳನ್ನು ತೆರವುಗೊಳಿಸಲು ಮತ್ತು ಸಾರಿಗೆ ವ್ಯವಸ್ಥೆಯನ್ನು ಪುನಃಸ್ಥಾಪಿಸಲು ಯುದ್ಧ ಎಂಜಿನಿಯರ್‌ಗಳು ಸಹ ಧರಾಲಿಯನ್ನು ತಲುಪಿದ್ದಾರೆ. ಹರ್ಸಿಲ್‌ನಲ್ಲಿರುವ ಮಿಲಿಟರಿ ಹೆಲಿಪ್ಯಾಡ್ ಸಹ ಕಾರ್ಯನಿರ್ವಹಿಸುತ್ತಿದೆ ಮತ್ತು ಮೂರು ನಾಗರಿಕ ಹೆಲಿಕಾಪ್ಟರ್‌ಗಳು ಭಟ್ವಾರಿ ಮತ್ತು ಹರ್ಸಿಲ್‌ನಲ್ಲಿ ಅಪಘಾತಕ್ಕೀಡಾದವರನ್ನು ಸ್ಥಳಾಂತರಿಸಲು ಮತ್ತು ಪರಿಹಾರ ಸಾಮಗ್ರಿಗಳ ವಿತರಣೆಗಾಗಿ ಯಶಸ್ವಿಯಾಗಿ ಇಳಿದಿವೆ ಎಂದು ಸೇನೆ ತಿಳಿಸಿದೆ.

<><><>

ಉತ್ತರಕಾಶಿ ಜಿಲ್ಲೆಯ ಧರಾಲಿ ವಿಪತ್ತು ಪೀಡಿತ ಪ್ರದೇಶದಲ್ಲಿ, ಕೇಂದ್ರ ಮತ್ತು ರಾಜ್ಯ ಸಂಸ್ಥೆಗಳು ಯುದ್ಧೋಪಾದಿಯಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ.  ಈ ನಡುವೆ, ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಧರಾಲಿ ಪ್ರದೇಶದಲ್ಲಿಂದು ಸಂತ್ರಸ್ತ ಜನರನ್ನು ಭೇಟಿ ಮಾಡಿ, ಯೋಗಕ್ಷೇಮವನ್ನು ವಿಚಾರಿಸಿದರು. ಗಾಯಾಳುಗಳಿಗೆ ಸರಿಯಾದ ಚಿಕಿತ್ಸೆ ನೀಡುವುದನ್ನು ಖಚಿತಪಡಿಸಿಕೊಳ್ಳಲು ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಪರಿಹಾರ ಪ್ರಯತ್ನಗಳನ್ನು ಚುರುಕುಗೊಳಿಸಲು, ಧರಾಲಿ ಪ್ರದೇಶಕ್ಕೆ ಅಗತ್ಯ ಆಹಾರ ಸಾಮಗ್ರಿಗಳು ಮತ್ತು ಪರಿಹಾರ ಸಾಮಗ್ರಿಗಳನ್ನು ಸಾಗಿಸಲು ಎರಡು ಹೆಲಿಕಾಪ್ಟರ್‌ಗಳನ್ನು ನಿಯೋಜಿಸಲಾಗಿದೆ. ಇದಲ್ಲದೆ, ರಸ್ತೆ ದುರಸ್ತಿ ಮತ್ತು ಇತರ ಅಗತ್ಯ ಕಾರ್ಯಗಳನ್ನು ತ್ವರಿತವಾಗಿ ಸುಗಮಗೊಳಿಸಲು ಭಾರತೀಯ ವಾಯುಪಡೆಯ ಚಿನೂಕ್ ಹೆಲಿಕಾಪ್ಟರ್‌ಗಳಿಂದ ಭಾರೀ ಯಂತ್ರೋಪಕರಣಗಳನ್ನು ತಲುಪಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

<><><>

೨೦೨೫ ಜುಲೈ ತಿಂಗಳ ಐಸಿಸಿ ಪುರುಷರ ಆಟಗಾರ ಪ್ರಶಸ್ತಿಗೆ ನಾಮನಿರ್ದೇಶನಗೊಂಡವರ ಪಟ್ಟಿಯಲ್ಲಿ ಭಾರತ ಕ್ರಿಕೆಟ್ ತಂಡದ ಶುಭ್‌ಮನ್ ಗಿಲ್ ಸೇರಿದ್ದಾರೆ. ನಾಮನಿರ್ದೇಶನಗೊಂಡ ಮೂವರು ಆಟಗಾರರಲ್ಲಿ ಶುಭಮನ್ ಗಿಲ್ ಜೊತೆ  ಇಂಗ್ಲೆಂಡ್ ನಾಯಕ ಬೆನ್ ಸ್ಟೋಕ್ಸ್ ಮತ್ತು ದಕ್ಷಿಣ ಆಫ್ರಿಕಾದ ವಿಯಾನ್ ಮುಲ್ಡರ್ ಇದ್ದಾರೆ. ಇಂಗ್ಲೆಂಡ್ ವಿರುದ್ಧ  ಭಾರತದ ೨-೨ ಡ್ರಾ ಸರಣಿಯಿಂದ ಮೂರು ಟೆಸ್ಟ್‌ಗಳಲ್ಲಿ ೯೪.೫ ರ ಸರಾಸರಿಯಲ್ಲಿ ೫೬೭ ರನ್ ಗಳಿಸುವ ಮೂಲಕ

ಶುಭ್‌ಮನ್ ಗಿಲ್  ಉತ್ತಮ ರನ್ ಕಲೆ ಹಾಕಿದುರು. ಮೊದಲ ಇನ್ನಿಂಗ್ಸ್‌ನಲ್ಲಿ ೨೬೯ ಮತ್ತು ಎರಡನೇ ಇನ್ನಿಂಗ್ಸ್‌ನಲ್ಲಿ ೧೬೧ ರನ್ ಗಳಿಸಿ ಭಾರತಕ್ಕೆ ದಾಖಲೆಯ ೩೩೬ ರನ್‌ಗಳ ಜಯ ತಂದುಕೊಟ್ಟರು.

<><><><>

ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಬಳಿಕ ಐಸಿಸಿ ಶ್ರೇಯಾಂಕದಲ್ಲಿ ಭಾರತ ತಂಡದ ಬ್ಯಾಟರ್ ಯಶಸ್ವಿ ಜೈಸ್ವಾಲ್ ೫ನೇ ಸ್ಥಾನಕ್ಕೇರಿದ್ದಾರೆ. ಶುಭ್‌ಮನ್ ಗಿಲ್ ೧೩ನೇ ಸ್ಥಾನಕ್ಕೆ ಹಾಗೂ ರಿಷಬ್ ಪಂತ್ ೮ನೇ ಸ್ಥಾನಕ್ಕೆ ಕುಸಿದಿದ್ದಾರೆ. ಉಳಿದಂತೆ ಟೆಸ್ಟ್ ರ್‍ಯಾಂಕಿಂಗ್‌ನಲ್ಲಿ ಜೋ ರೂಟ್ ಮೊದಲ ಸ್ಥಾನದಲ್ಲಿದ್ದರೆ, ಅವರ ತಂಡದ ಸಹ ಆಟಗಾರ ಹ್ಯಾರಿ ಬ್ರೂಕ್ ಎರಡನೇ ಸ್ಥಾನದಲ್ಲಿದ್ದಾರೆ. ನ್ಯೂಜಿಲೆಂಡ್‌ನ ಕೇನ್ ವಿಲಿಯಮ್ಸನ್ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದ್ದರೆ, ಆಸ್ಟ್ರೇಲಿಯಾದ ಸ್ಟೀವ್ ಸ್ಮಿತ್ ನಾಲ್ಕನೇ ಸ್ಥಾನದಲ್ಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>